ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ:18-05-2022

**:: ಸುತ್ತೋಲೆ ::**

ವಿಷಯ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಕಾರ್ಯಕ್ಷೇತ್ರದ ಆದ್ಯತಾ ವಲಯವನ್ನು ಪರಿಶೀಲಿಸಿ ಶಿಕ್ಷಕ ಮಿತ್ರ ತಂತ್ರಾಂಶದಲ್ಲಿ (EEDS) ಇಂಧೀಕರಿಸುವ ಬಗ್ಗೆ.

ಉಲ್ಲೇಖ:

1. ಈ ಕಛೇರಿ ಪತ್ರ ಸಂಖ್ಯೆ:ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ:12-04-2021, ದಿನಾಂಕ:07-06-2021, ದಿನಾಂಕ:25-06-2021, ದಿನಾಂಕ:03-09-2021, ದಿನಾಂಕ:05-05-2022
2. ನಿರ್ದೇಶಕರು, ಇತರೆ ಪರೀಕ್ಷೆಗಳು ಹಾಗೂ ವರ್ಗಾವಣಾ ಪ್ರಕ್ರಿಯೆ ನಿಯಂತ್ರಣಾಧಿಕಾರಿಗಳು ರವರ ಪತ್ರ ಸಂಖ್ಯೆ:ಇ-ಆಡಳಿತ ವರ್ಗಾವಣೆ/07/2020-21 ದಿನಾಂಕ:08-10-2021

*****

ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯ ಶಿಕ್ಷಕರು, ಅಧಿಕಾರಿಗಳು ಹಾಗೂ ಬೋಧಕೇತರ ಸಿಬ್ಬಂಧಿಗಳ ಸೇವಾ ಮಾಹಿತಿಯನ್ನು ಶಿಕ್ಷಕ ಮಿತ್ರ ತಂತ್ರಾಂಶದಲ್ಲಿ (EEDS) ಸಂಪೂರ್ಣವಾಗಿ ಇಂಧೀಕರಿಸುವಂತೆ ಅವಕಾಶ ಕಲ್ಪಿಸಿ ಉಲ್ಲೇಖಿತ ಪತ್ರಗಳಲ್ಲಿ ಸೂಚಿಸಲಾಗಿರುತ್ತದೆ. ಆದಾಗ್ಯೂ ಶಿಕ್ಷಕರ/ಅಧಿಕಾರಿಗಳ/ಬೋಧಕೇತರ ಸಿಬ್ಬಂದಿ ವರ್ಗದವರ ಮಾಹಿತಿಯನ್ನು ಪೂರ್ಣ ಪ್ರಮಾಣದಲ್ಲಿ ಇಂಧೀಕರಿಸಿಲ್ಲದಿರುವುದು ತಂತ್ರಾಂಶದ ವರದಿಗಳಲ್ಲಿ ಕಂಡುಬಂದಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶಗಳಂತೆ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳಾಗಿ, ಪಟ್ಟಣ ಪಂಚಾಯಿತಿಗಳನ್ನು ಪುರ ಸಭೆಗಳನ್ನಾಗಿ, ಪುರಸಭೆಗಳನ್ನು ನಗರ ಸಭೆಗಳನ್ನಾಗಿ ಉನ್ನತೀಕರಿಸಿ ತದನಂತರದಲ್ಲಿ ಅದರ ವ್ಯಾಪ್ತಿಯನ್ನು ವಿಸ್ತರಿಸಲಾಗಿದ್ದು, ವಿಸ್ತರಿಸಲಾದ ವ್ಯಾಪ್ತಿಗೆ ಒಳಪಡುವ ಶಾಲೆಗಳನ್ನು ವರ್ಗಾವಣಾ ಕಾಯ್ದೆಯಂತೆ ವಲಯ ವರ್ಗೀಕರಣಗೊಳಿಸಿ ಅದರಂತೆ EEDS ತಂತ್ರಾಂಶದಲ್ಲಿ ಶಿಕ್ಷಕರ ಮಾಹಿತಿಯನ್ನು ಇಂದೀಕರಿಸಬೇಕಾಗಿರುವುದು ಸಂಬಂಧಿಸಿದ ಬಟವಾಡೆ ಅಧಿಕಾರಿಗಳ ಆದ್ಯ ಕರ್ತವ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಬಟವಾಡೆ ಅಧಿಕಾರಿಗಳು ಈ ಬಗ್ಗೆ ಸೂಕ್ಷ್ಮವಾಗಿ ಪರಿಶೀಲಿಸಿ ವಲಯ ಬದಲಾವಣೆ ಮಾಹಿತಿಯನ್ನು ತಂತ್ರಾಂಶದಲ್ಲಿ ಕಡ್ಡಾಯವಾಗಿ ಇಂಧೀಕರಿಸುವುದು. ಯಾವುದೇ ವ್ಯತ್ಯಾಸಗಳು ಅಥವಾ ಲೋಪಗಳು ಕಂಡುಬಂದಲ್ಲಿ ಸಂಬಂಧಿಸಿದ ಬಟವಾಡೆ ಅಧಿಕಾರಿಗಳೇ ನೇರ ಹೊಣೆಗಾರರಾಗಿರುತ್ತಾರೆ ಎಂದು ತಿಳಿದಿರಲಿ. ತಂತ್ರಾಂಶಕ್ಕೆ ಸಂಬಂಧಿಸಿದಂತೆ ಯಾವುದೇ ತಾಂತ್ರಿಕ ಗೊಂದಲಗಳಿದ್ದಲ್ಲಿ ವಿವರಗಳನ್ನು karonlineserviceshelp@gmail.com ಗೆ ಇ-ಮೇಲ್ ಮುಖೇನ ಮನವಿ ಸಲ್ಲಿಸಲು ತಿಳಿಸಿದೆ.

ಡಾ.ವಿಶಾಲ್.ಆರ್., **ಭಾ.ಆ.ಸೇ.,**
ಆಯುಕ್ತರು

**ಪ್ರತಿಯನ್ನು**

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರಿಗೆ ಮಾಹಿತಿಗಾಗಿ

3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಮಾಹಿತಿಗಾಗಿ
4. ರಾಜ್ಯದ ಎಲ್ಲಾ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ

**ಇವರಿಗೆ,**

1. ರಾಜ್ಯದ ಎಲ್ಲಾ ವಿಭಾಗೀಯ ಜಂಟಿ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ)ರವರ ಮುಂದಿನ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ)ರವರ ಮುಂದಿನ ಅಗತ್ಯ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತುರ್ತು ಅಗತ್ಯ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ(ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖೇನ)
6. ಕಛೇರಿ ಪ್ರತಿ.